ರಾಜ್ಯದಲ್ಲಿರುವ ಮುನ್ಸಿಪಾಲಿಟಿ ಹಾಗೂ ಪಟ್ಟಣ ಪಂಚಾಯಿತಿಗಳಲ್ಲಿ ಮೂಲಭೂತ ಸೌಲಭ್ಯಗಳು

3399(4406) ಶ್ರೀ ಜೆ.ಟಿ. ಪಾಟೀಲ್ (ಬೀಳಗಿ) :— ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿರುವ ಅನೇಕ ಮುನಿಸಿಪಾಲಿಟಿ ಹಾಗೂ ಪಟ್ಟಣ ಪಂಚಾಯತ್‌ಗಳಲ್ಲಿ ಕನಿಷ್ಟ ಮೂಲಭೂತ ಸೌಕರ್ಯಗಳನ್ನು ಸಾರ್ವಜನಿಕರಿಗೆ ಒದಗಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ರೀತಿಯ ಕನಿಷ್ಟ ಸೌಲಭ್ಯಗಳನ್ನು ಹೊಂದದೇ ಇರುವ ಮುನಿಸಿಪಾಲಿಟಿ ಹಾಗೂ ಪಟ್ಟಣ ಪಂಚಾಯತ್‌ಗಳ ಸಂಖ್ಯೆ ಎಷ್ಟು;

ಇ) ಇಂತಹ ನಗರಸಭೆ ಮತ್ತು ಪಟ್ಟಣ ಪಂಚಾಯತಿಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕಾರ್ಯಕ್ರಮವನ್ನೇನಾದರೂ ರೂಪಾಸಿಕೊಂಡಿದೆಯೇ;

ಈ) ಸ್ವಸ್ಥ ಗ್ರಾಮ ಹಾಗೂ ಸ್ವಚ್ಛ ಗ್ರಾಮ ಈ ಯೋಜನೆಗಳಂತೆ ಸ್ವಚ್ಛ ಪಟ್ಟಣ ಪಂಚಾಯತ್ ಎಂಬ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಸರ್ಕಾರವು ಉದ್ದೇಶಿಸಿದೆಯೇ;

ಶ್ರೀ ಮಲ್ಲಿಕಾರ್ಜುನ ನಾಗಪ್ಪ (ಪೌರಾಡಳಿತ ರಾಜ್ಯ ಸಚಿವರು) :—

ಅ) ಪಟ್ಟಣಗಳ ಕನಿಷ್ಟ ಮೂಲಭೂತ ಸೌಕರ್ಯಗಳಾದ ರಸ್ತೆ, ನೀರು ಸರಬರಾಜು ಮತ್ತು ವಿದ್ಯುತ್ ಸೌಲಭ್ಯವನ್ನು ಆಯಾಯ ಸ್ಥಳೀಯ ಸಂಸ್ಥೆಗಳ ಆದಾಯದಲ್ಲಿ ಹಾಗೂ ಸರ್ಕಾರದಿಂದ ಬಿಡುಗಡೆಯಾಗುವ ಅನುದಾನದಲ್ಲಿ ಪೂರೈಸಲಾಗುತ್ತಿದೆ.

ಆ) ಕೇವಲ ಕೆಲವೇ ಸ್ಥಳೀಯ ಸಂಸ್ಥೆಗಳನ್ನು ಹೊರತುಪಡಿಸಿ ಹೆಚ್ಚಿನ ಸ್ಥಳೀಯ ಸಂಸ್ಥೆಗಳಿಗೆ ಈ ರೀತಿಯ ಕನಿಷ್ಟ ಸೌಲಭ್ಯಗಳನ್ನು ಸ್ಥಳೀಯ ಸಂಸ್ಥೆಗಳ ಆದಾಯದಲ್ಲಿ ಹಾಗೂ ಸರ್ಕಾರ ನೀಡುತ್ತಿರುವ ಅನುದಾನದಲ್ಲಿ ಪೂರೈಸಲಾಗುತ್ತಿದೆ.

ಇ) ಹೌದು

ಈ) ಇಲ್ಲ. ಆದರೂ ರಾಜ್ಯದಲ್ಲಿರುವ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ರಸ್ತೆಗಳ ಅಭಿವೃದ್ಧಿ ಚರಂಡಿ ನಿರ್ಮಾಣ, ಬೀದಿ ದೀಪಗಳ ವ್ಯವಸ್ಥೆ ಈ ಕಾರ್ಯದ ಸಲುವಾಗಿ ಹುಡ್ಕೋ ಸಂಸ್ಥೆಯಿಂದ ರೂ. 100 ಕೋಟಿಗಳನ್ನು ಸಾಲದ ರೂಪದಲ್ಲಿ ಪಡೆದು ಮಹಾನಗರಪಾಲಿಕೆಗಳಿಗೆ ತಲಾ ರೂ. 2 ಕೋಟಿಗಳಂತೆ ನಗರಸಭೆಗಳಿಗೆ ತಲಾ ರೂ. 1 ಕೋಟಿಯಂತೆ, ಪುರಸಭೆಗಳಿಗೆ ತಲಾ ರೂ. 50 ಲಕ್ಷಗಳಂತೆ ಮತ್ತು ಪಟ್ಟಣ ಪಂಚಾಯತಿಗಳಿಗೆ ತಲಾ ರೂ. 25 ಲಕ್ಷಗಳಂತೆ ಸಾಲವನ್ನು ಮಂಜೂರು ಮಾಡಲು ಸರ್ಕಾರವು ಉದ್ದೇಶಿಸಿದ್ದು ಸಧ್ಯದಲ್ಲಿಯೇ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು.